# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | **846** |
| ಸದಸ್ಯರ ಹೆಸರು | : | **ಶ್ರೀ ಮುನಿರಾಜು ಗೌಡ, (ವಿಧಾನಸಭೆಯಿಂದ ಚುನಾಯಿತರಾದವರು)** |
| ಉತ್ತರಿಸುವ ದಿನಾಂಕ | : | **20/09/2022** |
| ಉತ್ತರಿಸುವ ಸಚಿವರು | : | **ಮಾನ್ಯ ಪೌರಾಡಳಿತ, ಸಣ್ಣ ಕೈಗಾರಿಕೆಗಳು ಹಾಗೂ ಸಾರ್ವಜನಿಕ ಉದ್ದಿಮೆಗಳ ಸಚಿವರು** |

| | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯದಲ್ಲಿರುವ ಪುರಸಭೆ, ನಗರಸಭೆ ಮತ್ತು ಪಟ್ಟಣ ಪಂಚಾಯತಿಗಳ ಸಂಖ್ಯೆ ಎಷ್ಟು; ಸದರಿ ಕಾರ್ಯಾಲಯಗಳಿಗೆ ಮಂಜೂರಾಗಿರುವ ಸಿಬ್ಬಂದಿ ಎಷ್ಟು; ಮತ್ತು ಕಾರ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು; | ರಾಜ್ಯದಲ್ಲಿರುವ ನಗರಸಭೆಗಳು: 61.<br>ಪುರಸಭೆಗಳು: 125.<br>ಪಟ್ಟಣ ಪಂಚಾಯಿತಿಗಳು: 115.<br>(ಕೋನಪ್ಪನ ಅಗ್ರಹಾರ ಪುರಸಭೆಯ ಅಧಿಸೂಚನೆಗೆ ಮಾನ್ಯ ಉಚ್ಚ ನ್ಯಾಯಾಲಯ ಬೆಂಗಳೂರು ಪೀಠದಲ್ಲಿ ತಡೆಯಾಜ್ಞೆ ಇರುತ್ತದೆ).<br><br>ರಾಜ್ಯದ ನಗರಸಭೆ, ಪುರಸಭೆ ಹಾಗೂ ಪಟ್ಟಣ ಪಂಚಾಯಿತಿಗಳಲ್ಲಿ ಒಟ್ಟು ಮಂಜೂರಾದ ಹುದ್ದೆಗಳು: 34,868.<br>ಕಾರ್ಯನಿರ್ವಹಿಸುತ್ತಿರುವ ಅಧಿಕಾರಿ/ನೌಕರರು:<br>ಖಾಯಂ ಅಧಿಕಾರಿ / ನೌಕರರು: 11,942.<br>ದಿನಗೂಲಿ/ಗುತ್ತಿಗೆ / ಹೊರಗುತ್ತಿಗೆ ನೌಕರರು: 15,276.<br>ಒಟ್ಟು ಅಧಿಕಾರಿ / ನೌಕರರು: 27,218. |
| ಆ | ಸದರಿ ಕಾರ್ಯಾಲಯದ ಸಿಬ್ಬಂದಿ ಸೂಕ್ತ ಸಮಯಕ್ಕೆ ಕಾರ್ಯಾಲಯಕ್ಕೆ ಹಾಜರಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು; | ನಗರ ಸ್ಥಳೀಯ ಸಂಸ್ಥೆಗಳ ಹಲವು ಅಧಿಕಾರಿ/ಸಿಬ್ಬಂದಿ ಕಾರ್ಯಕಾರಿ (Executive) ಹುದ್ದೆಗಳಲ್ಲಿದ್ದು, ಸಿಬ್ಬಂದಿಯು ನಿಗದಿತ ಸಮಯಕ್ಕನುಗುಣವಾಗಿ ಕಾರ್ಯನಿರ್ವಹಿಸುತ್ತಿರುತ್ತಾರೆ. |
| ಇ | ಗ್ರಾಮೀಣ ಪ್ರದೇಶದಲ್ಲಿರುವ ಗ್ರಾಮ ಪಂಚಾಯಿತಿಗಳಲ್ಲೇ ಬಯೋಮೆಟ್ರಿಕ್ ಹಾಜರಾತಿ ವ್ಯವಸ್ಥೆ ಜಾರಿಗೆ ತಂದಿದ್ದರೂ, ನಗರ ಮತ್ತು ಪಟ್ಟಣ ಪ್ರದೇಶಗಳಲ್ಲಿ ಇರುವ ಪುರಸಭೆ, ನಗರಸಭೆ, ಪಟ್ಟಣ ಪಂಚಾಯತ್ ಗಳಲ್ಲಿ ಬಯೋಮೆಟ್ರಿಕ್ ಹಾಜರಾತಿ ವ್ಯವಸ್ಥೆ ಜಾರಿಗೆ ತರದಿರಲು ಕಾರಣವೇನು; | ರಾಜ್ಯದ 311 ನಗರ ಸ್ಥಳೀಯ ಸಂಸ್ಥೆಗಳ ಪೈಕಿ 212 ರಲ್ಲಿ ಬಯೋಮೆಟ್ರಿಕ್ ಹಾಜರಾತಿ ವ್ಯವಸ್ಥೆ ಜಾರಿಯಲ್ಲಿರುತ್ತದೆ. ಉಳಿದ 99 ನಗರ ಸ್ಥಳೀಯ ಸಂಸ್ಥೆಗಳಲ್ಲಿ ಬಯೋಮೆಟ್ರಿಕ್ ಹಾಜರಾತಿ ವ್ಯವಸ್ಥೆಯನ್ನು ಹಂತ-ಹಂತವಾಗಿ ಜಾರಿಗೊಳಿಸಲಾಗುತ್ತಿದೆ. |
| ಈ | ಸದರಿ ಕಾರ್ಯಾಲಯಗಳಲ್ಲಿ ಬಯೋಮೆಟ್ರಿಕ್ ಹಾಜರಾತಿ ತರಲು ಸರ್ಕಾರ ಉದ್ದೇಶಿಸಿದೆಯೇ; ಉದ್ದೇಶಿಸಿದ್ದಲ್ಲಿ, ಯಾವ ಕಾಲಮಿತಿಯಲ್ಲಿ ಜಾರಿಗೆ ತರಲಾಗುವುದು? | |

**ಸಂಖ್ಯೆ:ನಅಇ 45 ಎಲ್‌ಸಿಕ್ಯೂ 2022.**

(ಎನ್. ನಾಗರಾಜು ಎಂ ಟಿ ಬಿ)
**ಪೌರಾಡಳಿತ ಮತ್ತು ಸಣ್ಣ ಕೈಗಾರಿಕೆಗಳು ಹಾಗೂ**
**ಸಾರ್ವಜನಿಕ ಉದ್ದಿಮೆಗಳ ಸಚಿವರು**